ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

DTE-ADMI0ACM2/33/2022

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:21-06-2022.

-:: ಸು ತ್ತೋಲೆ::-

**ವಿಷಯ:** 2022-23ನೇ ಸಾಲಿನ ಡಿಪ್ಲೋಮಾ ಪ್ರವೇಶ – ಖಾಸಗಿ ಪಾಲಿಟೆಕ್ನಿಕ್‌ಗಳಿಗೆ ಪ್ರವೇಶಾವಧಿಯನ್ನು ವಿಸ್ತರಿಸುವ ಬಗ್ಗೆ.

**ಉಲ್ಲೇಖ:** ಈ ಕಛೇರಿಯ ಪ್ರವೇಶಾಧಿಸೂಚನೆಯ ದಿ:18-05-2022 & 10-06-2022.

*******

ಉಲ್ಲೇಖಿತ ಈ ಕಛೇರಿಯ ಪ್ರವೇಶಾಧಿಸೂಚನೆಯಲ್ಲಿ 2022-23ನೇ ಸಾಲಿನ ಪ್ರಥಮ ಡಿಪ್ಲೋಮಾ ಪ್ರವೇಶಕ್ಕ ಸಂಬಂಧಿಸಿದಂತೆ, ರಾಜ್ಯದ ಎಲ್ಲಾ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿನ ಪ್ರವೇಶಕ್ಕೆ ದಿನಾಂಕ:20-06-2022 ಕೊನೆಯ ದಿನಾಂಕವನ್ನಾಗಿ ನಿಗಧಿಪಡಿಸಲಾಗಿತ್ತು.

ಆದರೆ, ಪ್ರವೇಶ ಅವಧಿಯನ್ನು ವಿಸ್ತರಿಸಲು ಪಾಲಿಟೆಕ್ನಿಕ್‌ನ ಪ್ರಾಂಶುಪಾಲರುಗಳು ಕೋರಿರುವುದನ್ನು ಪರಿಗಣಿಸಿ ಒಟ್ಟಾರೆ ಸಂಸ್ಥೆಗಳ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ ಪ್ರವೇಶಾವಧಿಯನ್ನು **ದಿ:30-06-2022 ರವರೆಗೆ** ವಿಸ್ತರಿಸಿ ಅನುಮತಿ ನೀಡಲಾಗಿದೆ.

ಪ್ರಾಂಶುಪಾಲರು ಕೂಡಲೇ ಈ ಬಗ್ಗೆ ಕ್ರಮ ತೆಗೆದುಕೊಂಡು ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡುವುದು. ಸಂಸ್ಥೆಯ ಸೂಚನಾಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿ/ಪೋಷಕರುಗಳ ಗಮನಕ್ಕೆ ತರಲು ಸೂಚಿಸಿದೆ. ಪ್ರಯುಕ್ತ, ಇದನ್ನು ಖಾಸಗಿ/ಅನುದಾನಿತ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ. ಕೋವಿಡ್-19 ಹಿನ್ನಲೆಯಲ್ಲಿ ಸರ್ಕಾರವು ಆಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿಗಳನ್ನು ಹಾಗೂ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.

*ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.*

**ಜಂಟಿ ನಿರ್ದೇಶಕರು(ಆಡಳಿತ)**
**ತಾಂತ್ರಿಕ ಶಿಕ್ಷಣ ಇಲಾಖೆ**
**ಬೆಂಗಳೂರು**

ಇವರಿಗೆ,

*ಎಲ್ಲಾ ಖಾಸಗಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ - ಸೂಕ್ತ ಮಾಹಿತಿಗಾಗಿ ಮತ್ತು ಅನುಸರಣೆಗಾಗಿ*

**ಪ್ರತಿ ಇವರಿಗೆ ಮಾಹಿತಿಗಾಗಿ:**

1. ಆಯುಕ್ತರವರ ಆಪ್ತಶಾಖೆಗೆ.
2. ನಿರ್ದೇಶಕರವರ ಆಪ್ತಶಾಖೆಗೆ.
3. ಕಾರ್ಯದರ್ಶಿಯವರ ಆಪ್ತಶಾಖೆಗೆ.
4. ಸಾರ್ವಜನಿಕ ಸಂಪರ್ಕಾಧಿಕಾರಿಯವರಿಗೆ.
5. ಇ-ಗವರ್ನೆನ್ಸ್ ವಿಭಾಗಕ್ಕೆ - ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
6. ಡಿವಿಪಿ(2) ವಿಭಾಗಕ್ಕೆ
7. ಇಆರ್‌ಎಸ್(3) ವಿಭಾಗಕ್ಕೆ.
8. ಕಛೇರಿ ಪ್ರತಿ.